ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು–1.
ದೂ. **080-22372738** E-mail: nregs-ka@nic.in

ಗ್ರಾಅಪ 418 ಉಖಾಯೋ 2012 ದಿನಾಂಕ: 13–01–2015

ಗೆ

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ
**ಜಿಲ್ಲಾ ಪಂಚಾಯತ್ ಬೆಂಗಳೂರು (ನಗರ), ಬೆಂಗಳೂರು (ಗ್ರಾಮಂತರ),**
**ರಾಮನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಗುಲ್ಬರ್ಗಾ, ಬೀದರ್ ಮತ್ತು ಹಾಸನ**

ಮಾನ್ಯರೇ,

*ವಿಷಯ:* ರಾಜ್ಯವು ಘೋಷಿಸಿರುವ 9 ಜಿಲ್ಲೆಗಳ 34 ಬರಪೀಡಿತ ತಾಲ್ಲೂಕುಗಳಲ್ಲಿ ಉದ್ಯೋಗ ದಿನಗಳನ್ನು 100 ರಿಂದ 150 ದಿನಗಳವರೆಗೆ ಹೆಚ್ಚುವರಿಯಾಗಿ ನೀಡುವ ಸಂಬಂಧ ಕೇಂದ್ರ ಸರ್ಕಾರಕ್ಕೆ ಕೋರಿಕೆ ಪ್ರಸ್ತಾವನೆ ಸಲ್ಲಿಸಿರುವ ಕುರಿತು.

*ಉಲ್ಲೇಖ:* 1. ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ನಿರ್ದೇಶಕರ ಪತ್ರದ ಸಂಖ್ಯೆ: J-11060/56/2014-MGNREGA-IV ದಿನಾಂಕ: 11–12–2014

2. ರಾಜ್ಯ ಸರ್ಕಾರದ ಪ್ರಸ್ತಾವನೆಯ ಸಂಖ್ಯೆ: ಗ್ರಾಅಪ 418 ಉಖಾಯೋ 2012 ದಿನಾಂಕ: 05–11–2014

*****

ಪ್ರಸ್ತುತ ಸಾಲಿನಲ್ಲಿ ರಾಜ್ಯ ಸರ್ಕಾರವು 9 ಕಂದಾಯ ಜಿಲ್ಲೆಗಳ 34 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿರುತ್ತದೆ. ಸದರಿ ಬರಪೀಡಿತ ಪ್ರದೇಶಗಳಲ್ಲಿ ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುವ ಕೂಲಿ ಕಾರ್ಮಿಕರಿಗೆ ವಲಸೆ ಹೋಗದಂತೆ ಸ್ಥಳೀಯವಾಗಿ ಉದ್ಯೋಗವನ್ನು ಒದಗಿಸಲು ಪ್ರಸ್ತುತ ನೀಡುತ್ತಿರುವ ಉದ್ಯೋಗ ದಿನಗಳನ್ನು 100 ರಿಂದ 150 ದಿನಗಳವರೆಗೆ ಹೆಚ್ಚಿಸಿ ಆದೇಶ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಉಲ್ಲೇಖ(2)ರಲ್ಲಿ ಕಳುಹಿಸಿದ್ದು, ಈಗ ಕೇಂದ್ರ ಸರ್ಕಾರವು ಉಲ್ಲೇಖ(1)ರಲ್ಲಿ ಘೋಷಿಸಿದ 9 ಬರಪೀಡಿತ ಜಿಲ್ಲೆಗಳಲ್ಲಿ 100 ದಿನಗಳನ್ನು ಪೂರೈಸಿದ ಕುಟುಂಬಗಳ ಸಂಖ್ಯೆಯು ಬೇಡಿಕೆ ಸಲ್ಲಿಸಿದ ಕುಟುಂಬಗಳ ಸಂಖ್ಯೆಗೆ ತಾಳೆ ಮಾಡಿದಾಗ ಬಹಳ ಕಡಿಮೆಯಾಗಿರುತ್ತದೆ ಮತ್ತು ಇದನ್ನು ಶೇಕಡವಾರು ಪ್ರಮಾಣದಲ್ಲಿ ಪರಿಗಣಿಸಿದಾಗ ಶೇಕಡ 1 ರಿಂದ ಶೇಕಡ 12ರ ವ್ಯಾಪ್ತಿಯಲ್ಲಿ ಬರುತ್ತದೆ. ಈ ಕಾರಣದಿಂದ ಈ ಹಂತದಲ್ಲಿ ಉದ್ಯೋಗ ದಿನಗಳನ್ನು 150 ದಿನಗಳವರೆಗೆ ಹೆಚ್ಚಿಸಲು ಪರಿಗಣಿಸಿರುವುದಿಲ್ಲವೆಂದು ತಿಳಿಸಿರುತ್ತಾರೆ. ಉಲ್ಲೇಖ(1)ರ ಕೇಂದ್ರ ಸರ್ಕಾರದ ಪತ್ರದ ಪ್ರತಿಯನ್ನು ಇದರೊಂದಿಗೆ ಮುಂದಿನ ಕ್ರಮಕ್ಕಾಗಿ ಲಗತ್ತಿಸಿ ಕಳುಹಿಸಿದೆ.

ಮೇಲೆ ತಿಳಿಸಿರುವ ಕೇಂದ್ರ ಸರ್ಕಾರದ ಸೂಚನೆಗಳನ್ನು ಚಾಚು ತಪ್ಪದೇ ಪಾಲಿಸಲು ಕ್ರಮ ವಹಿಸುವುದು.

ತಮ್ಮ ವಿಶ್ವಾಸಿ

ಮುಖ್ಯ ~~ಕಾರ್ಯನಿರ್ವಾಹಕ ಅಧಿಕಾರಿ~~ 14/1/15
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಲಾಗಿದೆ.**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಪ್ತ ಕಾರ್ಯದರ್ಶಿಗಳು

3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಬೆಂಗಳೂರು/ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಸಾಮಾಜಿಕ ಅರಣ್ಯ), ಅರಣ್ಯ ಭವನ, ಬೆಂಗಳೂರು
4. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು
5. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
6. ಆಯುಕ್ತರು, ಪಶುಸಂಗೋಪನ ಇಲಾಖೆ, ವಿ.ವಿ.ಟವರ್, ಬೆಂಗಳೂರು
7. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
8. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು
9. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು
10. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ದಕ್ಷಿಣ ವಲಯ ಜಲ ಸಂಪನ್ಮೂಲ ಇಲಾಖೆ ಆನಂದ್‌ರಾವ್ ವೃತ್ತ ಬೆಂಗಳೂರು/ಉತ್ತರ ವಲಯ ಬಿಜಾಪುರ
11. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆ, ಬೆಂಗಳೂರು
12. ರಾಜ್ಯದ ಎಲ್ಲಾ ಉಳಿದ ಜಿಲ್ಲೆಗಳ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
13. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು-570011
14. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
15. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ
16. ಶ್ರೀ. ಶ್ರೀನಿವಾಸ ಮಾರಂಗಪ್ಪನವರ್ ವಿಶೇಷಾಧಿಕಾರಿ ಗಣಕಕೋಶ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
17. ಶ್ರೀ. ವೈ. ಮಹಾಂಕಾಳಪ್ಪ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
18. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.